## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1554

ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 19.12.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೇರಿಸುವ ಪ್ರಕ್ರಿಯೆಯು ಯಾವ ಹಂತದಲ್ಲಿದೆ; | ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಪಿಆರ್ 29 ಜಿಪಿಎಸ್ 2021 ಬೆಂಗಳೂರು, ದಿನಾಂಕ:09-11-2022 ರನ್ವಯ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ 1500 ಹುದ್ದೆಗಳನ್ನು ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂದು ಉನ್ನತೀಕರಿಸಲಾಗಿರುತ್ತದೆ. |
| (ಆ) | ಕೇವಲ 2010 ನೇ ಸಾಲಿನಲ್ಲಿ ನೇಮಕಗೊಂಡ PDO ಮಾತ್ರವೇ ಗ್ರೂಪ್ -ಬಿ ಹುದ್ದೆಗೆ ಮೇಲ್ದರ್ಜೆಗೇರಿಸಲು ಪರಿಗಣಿಸಿದ್ದು, 2010 ರ ನಂತರ ನೇಮಕಾತಿ ಹೊಂದಿದ PDO ಗಳಿಗೆ ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೇರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ 1500 ಹುದ್ದೆಗಳನ್ನು ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂದು ಉನ್ನತೀಕರಿಸಲಾಗಿರುತ್ತದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/313/GPK/2022(e) ದಿನಾಂಕ:13-03-2024 ರನ್ವಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದಿಂದ ಮುಂಬಡ್ತಿ ಮೂಲಕ ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಅಧಿಕಾರಿಗಳ ಜೇಷ್ಠತೆ, ಅರ್ಹತೆ ಆಧಾರದ ಮೇಲೆ ಮತ್ತು ಖಾಲಿ ಹುದ್ದೆಗಳ ಲಭ್ಯತೆಗೆ ಅನುಗುಣವಾಗಿ ಮುಂಬಡ್ತಿಗೆ ಅವಕಾಶವಿರುತ್ತದೆ. |

**ಸಂಖ್ಯೆ:** ಗ್ರಾಅಪ 1021 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.